## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 110 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶಿತರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 12-09-2022 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಪ್ರಾಧ್ಯಾಪಕರು, ಸಹ-ಪ್ರಾಧ್ಯಾಪಕರು, ಅಧ್ಯಾಪಕರು ಹಾಗೂ ಇತರೆ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರು, ಸಹ-ಪ್ರಾಧ್ಯಾಪಕರು, ಅಧ್ಯಾಪಕರು ಹಾಗೂ ಇತರೆ ಬೋಧಕ ಹುದ್ದೆಗಳ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.<br><br>ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ ಅಧ್ಯಾಪಕರ ಹುದ್ದೆಗಳ ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ.<br><br>ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾಧ್ಯಾಪಕರ ಹುದ್ದೆಗಳು ಮಂಜೂರಾಗಿರುವುದಿಲ್ಲ. ಸದರಿ ಹುದ್ದೆಗಳು ವೃತ್ತಿ ಪದೋನ್ನತಿ ಹುದ್ದೆಗಳಾಗಿದ್ದು, ನಿವೃತ್ತಿ ನಂತರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಾಗುತ್ತದೆ.<br><br>ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮಂಜೂರಾದ ಭರ್ತಿಯಾದ ಮತ್ತು ಖಾಲಿ (ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ) ಹುದ್ದೆಗಳ ವಿವರಗಳನ್ನು **ಅನುಬಂಧ-3** ರಲ್ಲಿ ಲಗತ್ತಿಸಿದೆ. |
| (ಆ) | ರಾಜ್ಯದಲ್ಲಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ-2020 ರನ್ವಯ ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಎಲ್ಲ ಬೋಧಕ ಹುದ್ದೆಗಳನ್ನು ತುಂಬಲು ಉನ್ನತ ಶಿಕ್ಷಣ ಪರಿಷತ್ ನಿಗದಿಪಡಿಸಿರುವ ಕಾಲಾವಧಿ ಎಷ್ಟು ಮತ್ತು ಈ ಕಾಲಾವಧಿಯೊಳಗೆ ಎಷ್ಟು ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ ಮತ್ತು ನೇಮಕಾತಿ ಪ್ರಕ್ರಿಯೆಯಲ್ಲಿರುವ ಹುದ್ದೆಗಳು ಎಷ್ಟು; (ನೇಮಕಾತಿ ಪ್ರಕ್ರಿಯೆ ವಿವರ | ರಾಜ್ಯದಲ್ಲಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ-2020 ರನ್ವಯ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಎಲ್ಲ ಬೋಧಕ ಹುದ್ದೆಗಳನ್ನು ತುಂಬಲು ಉನ್ನತ ಶಿಕ್ಷಣ ಪರಿಷತ್ತಿನಿಂದ ಯಾವುದೇ ಕಾಲಾವಧಿಯನ್ನು ನಿಗಧಿಪಡಿಸಿರುವುದಿಲ್ಲ.<br><br>ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ<br><br>ರಾಷ್ಟ್ರೀಯ ಶಿಕ್ಷಣ ನೀತಿ-2020ರ ಮುನ್ನೋಟದಂತೆ ಸ್ವಾವಲಂಬಿ ಸಂಸ್ಥೆಗಳನ್ನಾಗಿಸಲು ಹಾಗೂ |

| | | |
|---|---|---|
| | ಒಳಗೊಂಡಂತೆ ಪೂರ್ಣ ವಿವರ ನೀಡುವುದು); | ವಿಶ್ವವಿದ್ಯಾಲಯಗಳಲ್ಲಿನ ನೇಮಕಾತಿ ವಿಧಿ-ವಿಧಾನಗಳ ಕುರಿತು ವರದಿ ಸಲ್ಲಿಸಲು ಸರ್ಕಾರದ ಆದೇಶ ಸಂ. ಇಡಿ 309 ಯುಎನ್ಇ 2021, ದಿನಾಂಕ: 17-11-2021ರಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು.<br><br>ಸದರಿ ಸಮಿತಿಯು ದಿನಾಂಕ: 05-04-2022ರಂದು ಸಲ್ಲಿಸಿರುವ ವರದಿಯನ್ನಾಧರಿಸಿ ಅಂತಿಮವಾಗಿ ದಿನಾಂಕ: 13-07-2022ರಂದು ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ ಮಾದರಿ ಪರಿನಿಯಮಾವಳಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುತ್ತದೆ.<br><br>ಅದರನ್ವಯ ಸರ್ಕಾರದ ಪತ್ರ ಸಂ. ಇಡಿ 309 ಯುಎನ್ ಇ 2021, ದಿನಾಂಕ: 26-07-2022ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ ಪರಿನಿಯಮಾವಳಿಯನ್ನು ರಚಿಸಿಕೊಂಡು ಸರ್ಕಾರಕ್ಕೆ ಸಲ್ಲಿಸುವಂತೆ ವಿಶ್ವವಿದ್ಯಾಲಯಗಳಿಗೆ ತಿಳಿಸಲಾಗಿರುತ್ತದೆ.<br><br>ಆದ್ದರಿಂದ, ಪ್ರಸ್ತುತ ವಿಶ್ವವಿದ್ಯಾನಿಲಯಗಳಿಂದ ಮಾದರಿ ಪರಿನಿಯಮಾವಳಿಗಳು ಸ್ವೀಕೃತವಾಗುತ್ತಿದ್ದು, ಈ ಪರಿನಿಯಮಾವಳಿಗಳು ಗೌರವಾನ್ವಿತ ರಾಜ್ಯಪಾಲರಿಂದ ಅನುಮೋದನೆಗೊಂಡ ನಂತರ ನೇಮಕಾತಿ ಪ್ರಕ್ರಿಯೆ ಕುರಿತು ಕ್ರಮವಹಿಸಲಾಗುವುದು.<br><br>ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಬೋಧಕ ಹುದ್ದೆಗಳ ಕುರಿತಂತೆ<br><br>ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019(ಭಾ-3), ದಿನಾಂಕ:08.07.2020 ಮತ್ತು ತಿದ್ದುಪಡಿ ದಿನಾಂಕ:19.10.2020 ರಲ್ಲಿ ಪ್ರಕಟಿಸಲಾಗಿದೆ.<br><br>ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021 ರಂದು ಅಧಿಸೂಚನೆ ಹೊರಡಿಸಿದೆ. |

| | | |
|---|---|---|
| | | ಅದರಂತೆ, ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ದಿನಾಂಕ:30.09.2021 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿಯನ್ನು ದಿನಾಂಕ:18.08.2022 ರಂದು ಪ್ರಕಟಿಸಿದೆ. ಅಂತಿಮವಾಗಿ, ಆಯ್ಕೆ ಪಟ್ಟಿಯನ್ನು ಸರ್ಕಾರ/ ಇಲಾಖೆಗೆ ಸಲ್ಲಿಸಿದ ನಂತರ ಅರ್ಹ ಅಭ್ಯರ್ಥಿಗಳನ್ನು ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು. |
| (ಇ) | ರಾಜ್ಯದಲ್ಲಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾಧ್ಯಾಪಕ ಹುದ್ದೆಗಳು ಖಾಲಿ ಇದ್ದರೂ, ಬೋಧನೆಗಾಗಿ ಯುಜಿಸಿ ವೇತನ ಶ್ರೇಣಿ ಪಡೆಯುತ್ತಿರುವ ಕಾಲೇಜು ಪ್ರಾಧ್ಯಾಪಕರನ್ನು, ಉನ್ನತ ಶಿಕ್ಷಣ ಇಲಾಖೆಯಲ್ಲಿ ವಿಶೇಷಾಧಿಕಾರಿಗಳಾಗಿ ನಿಯುಕ್ತಿಗೊಳಿಸುತ್ತಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಗೆ ಮಾರಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ಮಾಹಿತಿ ನೀಡುವುದು) | ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯ ಸರ್ಕಾರವು ಕರ್ನಾಟಕ ಸಮಗ್ರ ಕಲಿಕಾ ನಿರ್ವಹಣಾವ್ಯವಸ್ಥೆ (LMS), ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆ (UUCMS) ಯೋಜನೆಗಳನ್ನು ರೂಪಿಸಿದ್ದು, ಸದರಿ ಯೋಜನೆಯ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಸಮರ್ಪಕ ಅನುಷ್ಠಾನಕ್ಕಾಗಿ ಕೇಂದ್ರ ಕಛೇರಿ ಹಾಗೂ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಶೈಕ್ಷಣಿಕ ಹಿನ್ನೆಲೆಯುಳ್ಳ ಬೋಧಕರ ಅವಶ್ಯಕತೆ ಇರುವುದರಿಂದ ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮರ್ಪಕ ನಿರ್ವಹಣೆಗಾಗಿ ಅನ್ಯ ಕಛೇರಿ ಕರ್ತವ್ಯದ ಮೇರೆಗೆ ನಿಯೋಜಿಸಿಕೊಳ್ಳಲಾಗಿದೆ. |
| (ಈ) | ರಾಜ್ಯದಲ್ಲಿ ಕಾಲೇಜು ಪ್ರಾಧ್ಯಾಪಕರನ್ನು ಉನ್ನತ ಶಿಕ್ಷಣ ಇಲಾಖೆಯಲ್ಲಿ ವಿಶೇಷಾಧಿಕಾರಿಗಳ ನಿಯುಕ್ತಿಗೊಳಿಸಿದ ಪ್ರಾಧ್ಯಾಪಕರ ಸ್ಥಾನದಲ್ಲಿ ಅತಿಥಿ ಉಪನ್ಯಾಸಕರಿಂದ ತುಂಬಲಾಗುತ್ತಿದ್ದು, ಇದು ಸರ್ಕಾರದ ಮೇಲೆ ಆರ್ಥಿಕ ಹೊರೆ ಆಗುವುದು ಮತ್ತು ಒಂದು ವೇಳೆ ವಿಶೇಷಾಧಿಕಾರಿಗಳ ನಿಯೋಜನೆ ರದ್ದಾಗಿ ಪ್ರಾಧ್ಯಾಪಕರು ಕಾಲೇಜಿಗೆ ಮರಳಿದರೆ ಅತಿಥಿ ಉಪನ್ಯಾಸಕರು ಕೆಲಸವಿಲ್ಲದೇ ಅಭದ್ರತೆಗೆ ಒಳಗಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು | ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಕೇಂದ್ರ ಕಛೇರಿ ಹಾಗೂ ಜಂಟಿ ನಿರ್ದೇಶಕರ ಕಛೇರಿಗಳಿಗೆ ವಿಶೇಷಾಧಿಕಾರಿ/ ಸಮನ್ವಯಾಧಿಕಾರಿಗಳಾಗಿ ನಿಯೋಜಿತ ರಾಗಿರುವ ಬೋಧಕರ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವ ಮೂಲಕ ನಿರ್ವಹಿಸಲಾಗುತ್ತಿದೆ. ನಿಯೋಜಿತ ಬೋಧಕರ ನಿಯೋಜನೆ ರದ್ದಾದ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರವಿರುವ ಇನ್ನೊಂದು ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗುತ್ತಿದೆ. ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದಿರುವುದರಿಂದ ಯಾವುದೇ ಹೆಚ್ಚಿನ ಆರ್ಥಿಕ ಹೊರೆಯಾಗುವುದಿಲ್ಲ. |

| | | |
|---|---|---|
| | ಸರಿಪಡಿಸಲು ಸರ್ಕಾರ ಜರುಗಿಸಿರುವ ಕ್ರಮವೇನು; | |
| (ಉ) | ರಾಜ್ಯದಲ್ಲಿ ಪ್ರಾಧ್ಯಾಪಕರು ವಿಶೇಷಾಧಿಕಾರಿಗಳಾಗಿ ಅನ್ಯ ಕೆಲಸ ನಿಮಿತ್ತ ನೇಮಿಸುವುದರಿಂದ, ಉನ್ನತ ಶಿಕ್ಷಣ ಇಲಾಖೆಯ ಮಹತ್ವಾಕಾಂಕ್ಷೆ ಕಾರ್ಯಕ್ರಮ (Learning Management System) (LMS) ಧ್ಯೇಯೋದ್ದೇಶಗಳಿಗೆ ಧಕ್ಕೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಈ ನಿಯೋಜನೆಗಳನ್ನು ರದ್ದುಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಪೂರ್ಣ ವಿವರ ನೀಡುವುದು) | ಉನ್ನತ ಶಿಕ್ಷಣ ವಲಯದಲ್ಲಿ ಬೋಧನೆ-ಕಲಿಕೆಯಲ್ಲಿ ಕ್ರಾಂತಿಕಾರಕ ಬದಲಾವಣೆ ತರುವ ಸಮಗ್ರ ಕಲಿಕಾ ನಿರ್ವಹಣಾ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದ ಪ್ರಥಮ ರಾಜ್ಯ ಕರ್ನಾಟಕವಾಗಿದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 25,000ಕ್ಕೂ ಹೆಚ್ಚು ಅಧ್ಯಾಪಕರಿಂದ 'ಕರ್ನಾಟಕ LMS' ಅನುಷ್ಠಾನಗೊಳ್ಳುತ್ತಿದ್ದು, 5 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ. ಪ್ರತಿ ಸೆಮಿಸ್ಟರ್‌ನಲ್ಲಿ ಇಲಾಖೆಯ ಅಧ್ಯಾಪಕರಿಂದ ಒಟ್ಟು 3.5 ಲಕ್ಷಕ್ಕೂ ಹೆಚ್ಚು PPT, Video, Study Material ಗಳನ್ನು ಒಳಗೊಂಡ ಮಲ್ಟಿಮೀಡಿಯಾ ಕಂಟೆಂಟ್ ಸೃಷ್ಟಿಗೊಳ್ಳುತ್ತಿದೆ. ಕಂಟೆಂಟ್, ಅಸೆಸ್ಮೆಂಟ್, ಪರ್ಫಾರ್ಮೆನ್ಸ್ ಅನಾಲಿಟಿಕ್ಸ್ ಮತ್ತು ಅಪೇಕ್ಷಿತ ಸಮಯ ಮತ್ತು ಸ್ಥಳದಲ್ಲಿ ಲಭ್ಯತೆ - ಇವುಗಳನ್ನು ಕರ್ನಾಟಕ LMS ನಲ್ಲಿ ಸಂಯೋಜಿಸಲಾಗಿದೆ.<br><br>ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರೂಪಿಸಿರುವ ಕರ್ನಾಟಕ LMS ಯೋಜನೆಯ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಸಮರ್ಪಕ ಅನುಷ್ಠಾನಕ್ಕಾಗಿ ಕೇಂದ್ರ ಕಛೇರಿ ಹಾಗೂ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಶೈಕ್ಷಣಿಕ ಹಿನ್ನೆಲೆಯುಳ್ಳ ಬೋಧಕರ ಅವಶ್ಯಕತೆ ಇರುವುದರಿಂದ ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ಅನ್ಯ ಕಛೇರಿ ಕರ್ತವ್ಯದ ಮೇರೆಗೆ ನಿಯೋಜಿಸಲಾಗಿರುತ್ತದೆ. |

**ಸಂಖ್ಯೆ: ಇಡಿ 248 ಯುಎನ್‌ಇ 2022**

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ - ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

## ಅನುಬಂಧ-1

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಪ್ರಾಧ್ಯಾಪಕ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಸಹ ಪ್ರಾಧ್ಯಾಪಕ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಇತರೆ ಬೋಧಕ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 01 | 10 | - |
| 2 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 23 | 44 | - |
| 3 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 10 | 08 | 1. ಪ್ರಾಂಶುಪಾಲರು - 01<br>2. ಸಂಶೋಧನಾ ಸಹಾಯಕರು - 04 |
| 4 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ | 09 | 14 | - |
| 5 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 13 | 11 | 1. ಪ್ರಾಂಶುಪಾಲರು - 02<br>2. ಗ್ರಂಥಪಾಲಕರು - 01 |
| 6 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 08 | 12 | - |
| 7 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 10 | 18 | - |
| 8 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 18 | 22 | - |
| 9 | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 20 | 12 | - |
| 10 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 07 | 25 | - |
| 11 | ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ | 12 | 11 | - |
| 12 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 48 | 125 | - |
| 13 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | 02 | 05 | - |
| 14 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 21 | 24 | - |
| 15 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | 20 | 32 | 01 |
| 16 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 75 | 94 | - |
| 17 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ | 03 | 06 | - |
| 18 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮಸೂರು | 03 | 05 (ಪ್ರವಾಚಕ) | - |

Deputy Secretary to Govt.,
Higher Education Department

| | | | | |
|---|---|---|---|---|
| 19 | ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ | 34 | 59 | - |
| 20 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 57 | 98 | - |
| 21 | ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್, ಬೆಂಗಳೂರು | 01 | 06 | 04 |
| 22 | ಮಹಾರಾಣಿ ಕ್ಲಷ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | **ಹೊಸ ವಿಶ್ವವಿದ್ಯಾಲಯಗಳಾಗಿದ್ದು, ಯಾವುದೇ ಹುದ್ದೆಗಳು ಮಂಜೂರಾಗಿರುವುದಿಲ್ಲ** | | |
| 23 | ನೃಪತುಂಗಾ ವಿಶ್ವವಿದ್ಯಾಲಯ, ಬೆಂಗಳೂರು | | | |
| 24 | ಮಂಡ್ಯ ಕ್ಲಷ್ಟರ್ ವಿಶ್ವವಿದ್ಯಾಲಯ, ಮಂಡ್ಯ | | | |
| | ಒಟ್ಟು | 394 | 635 | 09 |

Deputy Secretary to Govt.
Higher Education Department
(Universities)

**<u>ಅನುಬಂಧ-2</u>**

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ ಅಧ್ಯಾಪಕರ ಹುದ್ದೆಗಳ ವಿವರ.

| ವೃಂದ | ಮಂಜೂರು | ಭರ್ತಿ | ಖಾಲಿ |
|---|---|---|---|
| ಸಹಾಯಕ ಪ್ರಾಧ್ಯಾಪಕರು/ ಅಧ್ಯಾಪಕರು | 7611 | 5810 | 1801 |

ಸರ್ಕಾರದ ಉಪ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)

# ಅನುಬಂಧ-3

## ಸರ್ಕಾರಿ ಇಂಜಿನಿಯರಿಂಗ್ ಕಾಲೇಜು

| ಕ್ರ .ಸಂ | ಹುದ್ದೆಗಳು | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವಹುದ್ದೆಗಳು |
|---|---|---|---|---|
| 1 | ಪ್ರಾಂಶುಪಾಲರುಇಂಜಿನಿಯರಿಂಗ್ | 10 | 3 | 7 |
| 2 | ಪ್ರಾಧ್ಯಾಪಕರು | 64 | 16 | 48 |
| 3 | ಸಹಾಯಕಪ್ರಾಧ್ಯಾಪಕರು | 145 | 88 | 57 |
| 4 | ಪ್ಲೇಸ್‌ಮೆಂಟ್‌ಆಫೀಸರ್ | 10 | 0 | 10 |
| ಒಟ್ಟು -ಎ | | 229 | 107 | 122 |
| 5 | ಉಪನ್ಯಾಸಕರುಇಂಜಿನಿಯರಿಂಗ್ರೂಪ್ -ಬಿ | 397 | 225 | 172 |
| 6 | ಸಹಾಯಕನಿರ್ದೇಶಕರು [ದೈಹಿಕಶಿಕ್ಷಣಮತ್ತುಕ್ರೀಡೆ] | 10 | 6 | 4 |
| 7 | ಲೈಬ್ರರಿಯನ್ (ಇಂಜಿನಿಯರಿಂಗ್ಕಾಲೇಜು) | 11 | 5 | 6 |
| ಒಟ್ಟು -ಬಿ | | 418 | 236 | 182 |

## ಸರ್ಕಾರಿ ಪಾಲಿಟೆಕ್ನಿಕ್

| ಕ್ರ. ಸಂ | ಹುದ್ದೆಗಳು | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳು |
|---|---|---|---|---|
| 1 | ಪ್ರಾಂಶುಪಾಲರು (ಪಾಲಿಟೆಕ್ನಿಕ್) | 81 | 13 | 68 |
| ಒಟ್ಟು -ಎ | | 81 | 13 | 68 |
| 1 | ಉಪನ್ಯಾಸಕರು | 2731 | 1852 | 879 |
| 2 | ಸಿಸ್ಟಂಅನಾಲಿಸ್ಟ್ | 9 | 0 | 9 |
| ಒಟ್ಟು -ಬಿ | | 2740 | 1852 | 888 |

## ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ

| ಕ್ರ. ಸಂ | ಹುದ್ದೆಗಳು | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳು |
|---|---|---|---|---|
| 1 | ಪ್ರಾಂಶುಪಾಲರು (ಜೆ.ಟಿ.ಎಸ್) | 6 | 0 | 6 |
| 2 | ಉಪನ್ಯಾಸಕರು (ಜೆಟಿಎಸ್) | 38 | 22 | 16 |
| ಒಟ್ಟು -ಬಿ | | 44 | 22 | 22 |
| 1 | ಸಹಾಯಕಉಪನ್ಯಾಸಕರು (ಜೆಟಿಎಸ್) | 9 | 2 | 7 |
| ಒಟ್ಟು -ಸಿ | | 9 | 2 | 7 |

ಎಂ.ಜಿ. ವೆಂಕಟೇಶಯ್ಯ ಎಂ.ಎಸ್., ಎಲ್ ಎಲ್ ಬಿ.
ಸರ್ಕಾರದ ಉಪ ಕಾರ್ಯದರ್ಶಿ
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ
[illegible] ಕಟ್ಟಡ, ಬೆಂಗಳೂರು - [illegible]

## ಸಂಕ್ಷಿಪ್ತ ಘೋಷ್ವಾರೆ

| ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳು |
|---|---|---|---|
| ಎ | 310 | 120 | 190 |
| ಬಿ | 3202 | 2110 | 1092 |
| ಸಿ | 9 | 2 | 7 |
| ಡಿ | 0 | 0 | 0 |
| ಒಟ್ಟಾರೆ | 3521 | 2232 | 1289 |

<u>ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅನುದಾನಿತ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಹುದ್ದೆಗಳ ವಿವರ ಕೆಳಕಂಡಂತೆ ಇರುತ್ತವೆ.</u>

## ಅನುದಾನಿತ ಇಂಜಿನಿಯರಿಂಗ್ ಕಾಲೇಜು

| ಕ್ರ.ಸಂ | ಹುದ್ದೆಗಳು | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಪ್ರಾಂಶುಪಾಲರು | 10 | 0 | 10 |
| 2 | ಸಹಪ್ರಾಧ್ಯಾಪಕರು | 238 | 77 | 161 |
| 3 | ಪ್ಲೇಸ್‌ಮೆಂಟ್ ಆಫೀಸರ್ | **9** | **1** | **8** |
| 4 | ಪ್ರಾಧ್ಯಾಪಕರು | 99 | 21 | 78 |
| 5 | ಸಿಸ್ಟಂಅನಾಲಿಸ್ಟ್ | 2 | 1 | 1 |
| 6 | ಸಿಸ್ಟಂಮ್ಯಾನೇಜರ್ | 2 | 0 | 2 |
| ಒಟ್ಟು- ಎ | | 360 | 100 | 260 |
| 1 | ಸಹಾಯಕನಿರ್ದೇಶಕರು (ದೈಹಿಕಶಿಕ್ಷಣಮತ್ತುಕ್ರೀಡೆ) | 9 | 2 | 7 |
| 2 | ಸಹಾಯಕಪ್ರಾಧ್ಯಾಪಕರು | 565 | 365 | 200 |
| 3 | ಲೈಬ್ರೇರಿಯನ್ | **9** | **1** | **8** |
| 4 | ಚೀಫ್ ಲೈಬ್ರೇರಿಯನ್ | **1** | **0** | **1** |
| 5 | ಪ್ರೊಗ್ರಾಮರ್ | 4 | 2 | 2 |
| 6 | ವರ್ಕ್‌ಷಾಪ್ ಸೂಪರಿಂಟೆಂಡೆಂಟ್ | 1 | 1 | **0** |
| ಒಟ್ಟು-ಬಿ | | 589 | 371 | 218 |

## ಅನುದಾನಿತ ಪಾಲಿಟೆಕ್ನಿಕ್ ಕಾಲೇಜು

| | | | | |
|---|---|---|---|---|
| 1 | ಪ್ರಾಂಶುಪಾಲರು | 43 | 21 | 22 |
| ಒಟ್ಟು-ಎ | | 43 | 21 | 22 |
| 2 | ಉಪನ್ಯಾಸಕರು | 1276 | 969 | 307 |
| ಒಟ್ಟು-ಬಿ | | 1276 | 969 | 307 |

....3

## <u>ಸಂಕ್ಷಿಪ್ತ ಘೋಷ್ವಾರೆ</u>

| ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳು |
|---|---|---|---|
| ಎ | 403 | 121 | 282 |
| ಬಿ | 1865 | 1340 | 525 |
| ಒಟ್ಟಾರೆ | 2268 | 1461 | 807 |

[illegible] ವೆಂಕಟೇಶಯ್ಯ [illegible]
ಸರ್ಕಾರದ ಉಪ ಕಾರ್ಯದರ್ಶಿ
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ
ಬಹುಮಹಡಿಗಳ ಕಟ್ಟಡ, ಬೆಂಗಳೂರು - 560001

## ಕರ್ನಾಟಕ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶಿತರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 110ಕ್ಕೆ ಸಂಬಂಧಿಸಿದಂತೆ ಪೂರಕ ಟಿಪ್ಪಣಿ

*****

- ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರು, ಸಹ-ಪ್ರಾಧ್ಯಾಪಕರು, ಅಧ್ಯಾಪಕರು ಹಾಗೂ ಇತರೆ ಬೋಧಕ ಹುದ್ದೆಗಳ ವಿವರಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ವಿವರ.

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಪ್ರಾಧ್ಯಾಪಕ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಸಹ ಪ್ರಾಧ್ಯಾಪಕ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಇತರೆ ಬೋಧಕ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 01 | 10 | - |
| 2 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 23 | 44 | - |
| 3 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 10 | 08 | 1. ಪ್ರಾಂಶುಪಾಲರು - 01<br>2. ಸಂಶೋಧನಾ ಸಹಾಯಕರು - 04 |
| 4 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ | 09 | 14 | - |
| 5 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 13 | 11 | 1. ಪ್ರಾಂಶುಪಾಲರು - 02<br>2. ಗ್ರಂಥಪಾಲಕರು - 01 |
| 6 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 08 | 12 | - |
| 7 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 10 | 18 | - |
| 8 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 18 | 22 | - |
| 9 | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 20 | 12 | - |
| 10 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 07 | 25 | - |
| 11 | ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ | 12 | 11 | - |
| 12 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 48 | 125 | - |
| 13 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | 02 | 05 | - |
| 14 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 21 | 24 | - |
| 15 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | 20 | 32 | 01 |
| 16 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 75 | 94 | - |
| 17 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ | 03 | 06 | - |
| 18 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು | 03 | 05 (ಪ್ರವಾಚಕ) | - |
| 19 | ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ | 34 | 59 | - |
| 20 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 57 | 98 | - |
| 21 | ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್, ಬೆಂಗಳೂರು | 01 | 06 | 04 |
| 22 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | ಹೊಸ ವಿಶ್ವವಿದ್ಯಾಲಯಗಳಾಗಿದ್ದು, ಯಾವುದೇ ಹುದ್ದೆಗಳು ಮಂಜೂರಾಗಿರುವುದಿಲ್ಲ | | |
| 23 | ನೃಪತುಂಗಾ ವಿಶ್ವವಿದ್ಯಾಲಯ, ಬೆಂಗಳೂರು | | | |
| 24 | ಮಂಡ್ಯ ಕ್ಲಸ್ಟರ್ ವಿಶ್ವವಿದ್ಯಾಲಯ, ಮಂಡ್ಯ | | | |
| | ಒಟ್ಟು | 394 | 635 | 09 |

## ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ

- ರಾಷ್ಟ್ರೀಯ ಶಿಕ್ಷಣ ನೀತಿ-2020ರ ಮುನ್ನೋಟದಂತೆ ಸ್ವಾವಲಂಬಿ ಸಂಸ್ಥೆಗಳನ್ನಾಗಿಸಲು ಹಾಗೂ ವಿಶ್ವವಿದ್ಯಾಲಯಗಳಲ್ಲಿನ ನೇಮಕಾತಿ ವಿಧಿ-ವಿಧಾನಗಳ ಕುರಿತು ವರದಿ ಸಲ್ಲಿಸಲು ಸರ್ಕಾರದ ಆದೇಶ ಸಂ. ಇಡಿ 309 ಯುಎನ್ಇ 2021, ದಿನಾಂಕ: **17-11-2021**ರಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು.

- ಸದರಿ ಸಮಿತಿಯು ದಿನಾಂಕ: **05-04-2022**ರಂದು ಸಲ್ಲಿಸಿರುವ ವರದಿಯನ್ನಾಧರಿಸಿ ಅಂತಿಮವಾಗಿ ದಿನಾಂಕ: **13-07-2022**ರಂದು ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ ಮಾದರಿ ಪರಿನಿಯಮಾವಳಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುತ್ತದೆ.

- ಅದರನ್ವಯ ಸರ್ಕಾರದ ಪತ್ರ ಸಂ. ಇಡಿ 309 ಯುಎನ್ಇ 2021, ದಿನಾಂಕ: **26-07-2022** ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು ಬೋಧಕ ಹುದ್ದೆಗಳ ನೇಮಕಾತಿ ಕುರಿತಂತೆ ಪರಿನಿಯಮಾವಳಿಯನ್ನು ರಚಿಸಿಕೊಂಡು ಸರ್ಕಾರಕ್ಕೆ ಸಲ್ಲಿಸುವಂತೆ ವಿಶ್ವವಿದ್ಯಾಲಯಗಳಿಗೆ ತಿಳಿಸಲಾಗಿರುತ್ತದೆ.

## ಕಾಲೇಜು ಶಿಕ್ಷಣ ಇಲಾಖೆ:

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವ ಕೆಳಕಂಡ ಯೋಜನೆಗಳನ್ನು ಇಲಾಖೆಯಲ್ಲಿ ರೂಪಿಸಲಾಗಿರುತ್ತದೆ.

### I. Karnataka Learning Management System (LMS): -

1. ಸರ್ಕಾರ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದೇಶದಲ್ಲೇ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯದಲ್ಲಿ ಸಮಗ್ರ ಕಲಿಕಾ ನಿರ್ವಹಣಾ ವ್ಯವಸ್ಥೆಯನ್ನು (LMS) ಅನುಷ್ಠಾನಗೊಳಿಸಲಾಗುತ್ತಿದೆ.
2. ಸಮಗ್ರ ಕಲಿಕಾ ನಿರ್ವಹಣಾ ವ್ಯವಸ್ಥೆಯು ಆಧುನಿಕ ತಂತ್ರಜ್ಞಾನದ ನೆರವಿನಿಂದ ಸಾಂಪ್ರದಾಯಿಕ ಬೋಧನೆ/ಕಲಿಕೆಗಳಿಗೆ ಪೂರಕವಾಗಿ ಶಿಕ್ಷಣದ ಎಲ್ಲಾ ಆಯಾಮಗಳನ್ನೂ ಪರಿಷ್ಕರಿಸಿ ಒಂದೇ ಆನ್‌ಲೈನ್ ವೇದಿಕೆಗೆ ತರುವ ಐಸಿಟಿ (Information Communication Technology) ಯುಕ್ತ ತಂತ್ರಾಂಶವಾಗಿದೆ.
3. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಗಳಲ್ಲಿ 25,000/- ಸಾವಿರಕ್ಕೂ ಹೆಚ್ಚು ಅಧ್ಯಾಪಕರಿಂದ ಪ್ರತಿ ಸೆಮೆಸ್ಟರ್‌ನಲ್ಲಿ ಒಟ್ಟು 3.5 ಲಕ್ಷಕ್ಕೂ ಹೆಚ್ಚು PPT, Video, Study Material ಗಳನ್ನು ಒಳಗೊಂಡ ಮಲ್ಟಿಮೀಡಿಯಾ ಕಂಟೆಂಟ್ ಸೃಷ್ಟಿಗೊಳ್ಳುತ್ತಿದೆ. ಇದರಿಂದಾಗಿ ಕರ್ನಾಟಕ LMS ಮೂಲಕ 5.00 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ.
4. ಈ ತಂತ್ರಾಂಶದಲ್ಲಿ ಪ್ರಮುಖವಾಗಿ ಕಂಟೆಂಟ್, ಅಸೆಸ್‌ಮೆಂಟ್, ಫರ್ಫಾರ್ಮೆನ್ಸ್ ಅನಾಲಿಟಿಕ್ಸ್ ಮತ್ತು ಅಪೇಕ್ಷಿತ ಸಮಯ ಮತ್ತು ಸ್ಥಳದಲ್ಲಿ ವಿಷಯ ಲಭ್ಯತೆ ಇವುಗಳನ್ನು ಸಂಯೋಜಿಸಲಾಗಿದೆ.
5. ಈ ತಂತ್ರಾಂಶವನ್ನು ವೆಬ್ ಪೋರ್ಟಲ್, ಡೆಸ್ಕ್ ಟಾಪ್ ಆಪ್, ಮೊಬೈಲ್ ಆಪ್ ಮೂಲಕ ವಿದ್ಯಾರ್ಥಿಗಳಿಗೆ ಲಭ್ಯಗೊಳಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.
6. ಕರ್ನಾಟಕ LMS ನಡೆಸುವುದರಿಂದ ಬೋಧನೆ-ಕಲಿಕೆ ಯಾವುದೇ ಅಡೆತಡೆ ಇಲ್ಲದೆ ನಿರಂತರವಾಗಿ ವಿದ್ಯಾರ್ಥಿಗಳಿಗೆ ಲಭ್ಯವಾಗುವುದರ ಮೂಲಕ ಶಿಕ್ಷಣ ಪ್ರಕ್ರಿಯೆಗೆ ಪೂರ್ಣತೆಯನ್ನು ತಂದುಕೊಡುತ್ತದೆ.

7. ರಾಜ್ಯದಲ್ಲಿ 13 ಸಂಯೋಜಕ ವಿಶ್ವವಿದ್ಯಾಲಯಗಳಿದ್ದು, ಇಲಾಖಾ ವ್ಯಾಪ್ತಿಯ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಈ ವಿಶ್ವವಿದ್ಯಾಲಯಗಳಿಗೆ ಸಂಯೋಜನೆಗೊಂಡಿರುತ್ತವೆ.

8. ಈ ಎಲ್ಲಾ ವಿಶ್ವವಿದ್ಯಾಲಯಗಳ ಪದವಿ ಹಂತದ ಪ್ರತಿ ಸಮಿಸ್ಟರ್‌ನ ಪಠ್ಯಕ್ರಮ ವಿಭಿನ್ನವಾಗಿದ್ದು, ಇವುಗಳಿಗೆ ಅನುಸಾರವಾದ Content Creation ಮತ್ತು Uploading ಸಕಾಲದಲ್ಲಿ ನಡೆಯಬೇಕಾಗಿರುತ್ತದೆ.

9. ಈ ಕಾರ್ಯಗಳನ್ನು ಕಾಲೇಜಿನ ಅಧ್ಯಾಪಕರು ನಿರ್ವಹಿಸುತ್ತಿದ್ದು, ಸದರಿ ಕಾರ್ಯಕ್ರಮದ ರೂಪುರೇಷೆಗಳನ್ನು (Design) ಕೇಂದ್ರ ಕಛೇರಿ ಮತ್ತು ಜಂಟಿ ನಿರ್ದೇಶಕರ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷಾಧಿಕಾರಿಗಳು ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಈ ಕಾರ್ಯಕ್ರಮಕ್ಕೆ ಅವಶ್ಯವಿರುವ ತಂತ್ರಾಂಶವನ್ನು ಸಂಬಂಧಿಸಿದ ಸಂಸ್ಥೆಗಳೊಂದಿಗೆ ಸಮನ್ವಯ ನಡೆಸಿ ಅಂತಿಮಗೊಳಿಸುವ ಕಾರ್ಯವು ವಿಶೇಷಾಧಿಕಾರಿಗಳದ್ದಾಗಿರುತ್ತದೆ.

10. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪಠ್ಯ ಕ್ರಮವು ವಿಶ್ವವಿದ್ಯಾನಿಲಯವಾರು ವಿಭಿನ್ನವಾಗಿದ್ದು. ಇವುಗಳಿಗೆ ಅನುಸಾರವಾಗಿ, ಕಂಟೆಂಟ್ ಕ್ರಿಯೇಷನ್ ಮತ್ತು ಸಕಾಲದಲ್ಲಿ ವಿದ್ಯಾರ್ಥಿಗಳಿಗೆ ತಲುಪುವಂತೆ ಅಪಲೋಡ್ ಮಾಡುವ ಕಾರ್ಯವನ್ನು ವಿಶೇಷಾಧಿಕಾರಿಗಳು ನಿರ್ವಹಿಸುತ್ತಿರುತ್ತಾರೆ.

11. ಈಗಾಗಲೇ 3.5 ಲಕ್ಷಕ್ಕೂ ಹೆಚ್ಚು ಕಂಟೆಂಟ್ ಸಿದ್ಧಪಡಿಸಲಾಗಿದ್ದು, ಇದನ್ನು ವಿದ್ಯಾರ್ಥಿಗಳು ಹಾಗೂ ಬೋಧಕರು ಬಳಸಿಕೊಳ್ಳುತ್ತಿರುವ ಬಗ್ಗೆ ಮೇಲ್ವಿಚಾರಣೆಯನ್ನು ಹಾಗೂ ಸಮಗ್ರವಾಗಿ ಕಾಲೇಜುವಾರು ಅನುಷ್ಠಾನಗೊಳಿಸುವ ಜವಾಬ್ದಾರಿಯು ವಿಶೇಷಾಧಿಕಾರಿಗಳದ್ದಾಗಿರುತ್ತದೆ.

## II. National Assessment and Accreditation Council (NAAC):

ಉನ್ನತ ಶಿಕ್ಷಣ ಸಂಸ್ಥೆಗಳ ಸಮಗ್ರ ಗುಣಮಟ್ಟದ ಪರೀಕ್ಷೆ ಮತ್ತು ಮಾನ್ಯತೆಗಳನ್ನು ನೀಡಲು ರಾಷ್ಟ್ರಮಟ್ಟದ National Assessment and Accreditation Council ಸಂಸ್ಥೆಯು ಕಾರ್ಯನಿರ್ವಹಿಸುತ್ತಿದೆ. 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನಾಕ್ ಪ್ರಕ್ರಿಯೆಯು ಕಡ್ಡಾಯವಾಗಿರುತ್ತದೆ.

1. 240 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಪ್ರಕ್ರಿಯೆಯಲ್ಲಿ ಒಳಪಟ್ಟಿದ್ದು, ಇಲಾಖೆಯಿಂದ Institutional Information for Quality Assessment (IIQA ಮತ್ತು Self Study Report (SSR) ವರದಿಗಳನ್ನು ಕಾಲೇಜುಗಳಲ್ಲಿ ಸಿದ್ಧಪಡಿಸಬೇಕಿರುತ್ತದೆ.

2. ನ್ಯಾಕ್ ಪ್ರಕ್ರಿಯೆಯಲ್ಲಿ ಅಂತಿಮ ಹಂತವಾದ Data Validation and Verification (DVV) ಸಂದರ್ಭದಲ್ಲಿ, ಕಾಲೇಜು ನ್ಯಾಕ್ ಪೋರ್ಟಲ್‌ನಲ್ಲಿ ಸಲ್ಲಿಸಬೇಕಿರುತ್ತದೆ.
3. ನ್ಯಾಕ್ ಪೀರ್ ಟೀಮ್ ಭೇಟಿಗೆ ಮುನ್ನ ಮಾಕ್ ಪೀರ್ ಟೀಂ ಭೇಟಿ ನೀಡಿ ಪ್ರಾಂಶುಪಾಲರು PPT, IQAC ಸಂಚಾಲಕರ PPT ಹಾಗೂ ಇಲಾಖೆವಾರು PPTಗಳನ್ನು ಸಿದ್ಧಪಡಿಸಿಕೊಳ್ಳಬೇಕಾಗುತ್ತದೆ

4. 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನ್ಯಾಕ್ ಪ್ರಕ್ರಿಯೆಯು ಕಡ್ಡಾಯವಾಗಿರುವ ಹಿನ್ನೆಲೆಯಲ್ಲಿ, ಈ ಕಾರ್ಯಗಳನ್ನು ಸಮರ್ಪಕವಾಗಿ ಹಾಗೂ ನ್ಯೂನತೆಗಳಿಲ್ಲದೆ ಸಕಾಲದಲ್ಲಿ ನಿರ್ವಹಿಸಲು ಕಾಲೇಜುಗಳ ಪ್ರಾಂಶುಪಾಲರಿಗೆ ಮಾರ್ಗದರ್ಶನ ಅಗತ್ಯವಿರುತ್ತದೆ. ಈ ಕಾರ್ಯವನ್ನು ನಿರ್ವಹಿಸಲು ಕಾಲೇಜು ಶಿಕ್ಷಣ ಆಯುಕ್ತಾಲಯ ಹಾಗೂ ಜಂಟಿನಿರ್ದೇಶಕರ ಕಛೇರಿಗಳಿಗೆ ಈ ವಿಷಯಗಳಲ್ಲಿ ಅನುಭವವಿರುವ ಬೋಧಕರನ್ನು ಅನ್ಯ ಕಛೇರಿ ಕರ್ತವ್ಯದ ಮೇರೆಗೆ ವಿಶೇಷಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಲು ಆದೇಶ ಮಾಡಲಾಗಿರುತ್ತದೆ.

5. ವಿಶೇಷಾಧಿಕಾರಿಗಳ ಮಾರ್ಗದರ್ಶನ ಹಾಗೂ ಪರಿಶೀಲನೆಗಳ ಹಿನ್ನೆಲೆಯಲ್ಲಿ ಈಗಾಗಲೇ 97 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಪ್ರಕ್ರಿಯೆಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಅವುಗಳ ಪೈಕಿ 03 ಕಾಲೇಜುಗಳು 'A' ಶ್ರೇಣಿಯನ್ನು 09 ಕಾಲೇಜುಗಳು B++ ಶ್ರೇಣಿಗಳು, 22 ಕಾಲೇಜುಗಳು B+ ಶ್ರೇಣಿಯನ್ನು ಹಾಗೂ 46 ಕಾಲೇಜುಗಳು B ಶ್ರೇಣಿಗಳನ್ನು ಪಡೆದುಕೊಂಡಿರುತ್ತವೆ.

...4

6. ಈ ಕಾರ್ಯದೊಂದಿಗೆ ಗುಣಮಟ್ಟ ಭರವಸೆ ಕೋಶದ ನಿರ್ವಹಣೆಯಲ್ಲೂ ಮೇಲ್ವಿಚಾರಣೆಯನ್ನು ವಿಶೇಷಾಧಿಕಾರಿಗಳು ನಿರ್ವಹಿಸುತ್ತಿರುತ್ತಾರೆ.
7. ಕಾಲೇಜು ಮಟ್ಟದ ಆಂತರಿಕ ಗುಣಮಟ್ಟ ಭರವಸೆ ಕೋಶದ ಮೇಲ್ವಿಚಾರಣೆ, ಆಕಾಡೆಮಿಕ್ ಕ್ಯಾಲೆಂಡರ್ ಹಾಗೂ ಸರ್ಕಾರಿ ಕಾಲೇಜುಗಳ ಸ್ವಾಯತ್ತತೆಗೆ ಸಂಬಂಧಿಸಿದ ಕಾರ್ಯಗಳ ಮೇಲ್ವಿಚಾರಣೆಯು ವಿಶೇಷಾಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ.

## III. Student Placement:

1. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರಿಗೆ Placement ಕುರಿತ ಕಾರ್ಯಾಗಾರಗಳ ಆಯೋಜನೆ, ಉದ್ಯೋಗ ಮೇಳಗಳು, ವಿದ್ಯಾರ್ಥಿಗಳಲ್ಲಿ ಜಾಗೃತಿ, ವಿವಿಧ ಬಹುರಾಷ್ಟ್ರೀಯ ಕಂಪನಿಗಳೊಂದಿಗೆ ಸಮಾಲೋಚನೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಉಪಯುಕ್ತವೆನಿಸುವ ತರಬೇತಿ ಕಾರ್ಯಕ್ರಮಗಳ ಆಯೋಜನೆ IAS, KAS ಇತ್ಯಾದಿ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ Blog Mangement ಇತ್ಯಾದಿ ಕಾರ್ಯಗಳನ್ನು ಸಂಬಂಧಿಸಿದ ವಿಶೇಷಾಧಿಕಾರಿಗಳು ನಿರ್ವಹಿಸುತ್ತಿರುತ್ತಾರೆ.
2. ಈಗಾಗಲೇ 10 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಮೃದು ಕೌಶಲ್ಯ ತರಬೇತಿಯನ್ನು ಹಾಗೂ 04 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು, ಅನ್ ಅಕಾಡೆಮಿ ಸಂಸ್ಥೆಯ ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುತ್ತಾರೆ.

## IV. Education Management Information System (EMIS):

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅಸ್ತಿತ್ವದಲ್ಲಿರುವ ಭೌತಿಕ ಮತ್ತು ಶೈಕ್ಷಣಿಕ ಸಂಪನ್ಮೂಲಗಳ ವಿವರ, ವಿದ್ಯಾರ್ಥಿಗಳು, ಅಧ್ಯಾಪಕರು ಹಾಗೂ ಅಧ್ಯಾಪಕೇತರ ಸಿಬ್ಬಂದಿಯ ಸಂಖ್ಯೆ ಇವುಗಳಿಗೆ ಅನುಗುಣವಾಗಿ ಸಂಪನ್ಮೂಲಗಳ ಅಗತ್ಯದ ವಿವರ ಇವುಗಳನ್ನು ನಿರಂತರವಾಗಿ ನಿರ್ವಹಿಸುವುದು ಮತ್ತು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ Web Content Management ಅಡಿಯಲ್ಲಿ ಜಾಲತಾಣದ ಕಂಟೆಂಟ್ ನಿರ್ವಹಣೆಯನ್ನು ಸಂಬಂಧಿಸಿದ ವಿಶೇಷಾಧಿಕರಿಗಳು ನಿರ್ವಹಿಸುತ್ತಿರುತ್ತಾರೆ.

ಮೇಲ್ಕಂಡ ಶೈಕ್ಷಣಿಕ ಸಂಬಂಧಿತ ಕಾರ್ಯಗಳನ್ನು ಶೈಕ್ಷಣಿಕ ಹಿನ್ನಲೆಯುಳ್ಳ ಬೋಧಕರು ನಿರ್ವಹಿಸುವುದು ಸೂಕ್ತವಾಗಿದ್ದ ಹಿನ್ನೆಲೆಯಲ್ಲಿ, ಹಲವು ಬೋಧಕರನ್ನು ಕಾಲೇಜು ಶಿಕ್ಷಣ ಆಯುಕ್ತಾಲಯ ಮತ್ತು ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಕಛೇರಿಗೆ ಅನ್ಯ ಕಚೇರಿ ಕರ್ತವ್ಯದ ಮೇರೆಗೆ ನಿಯೋಜಿಸಿಕೊಳ್ಳಲಾಗಿರುತ್ತದೆ. ಸದರಿ ಬೋಧಕರ ನಿಯೋಜನೆಯಿಂದ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗದಂತೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿರುತ್ತದೆ.

## ತಾಂತ್ರಿಕ ಶಿಕ್ಷಣ ಇಲಾಖೆ:

- ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪಾಲಿಟೆಕ್‌ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಬೋಧಕ ಸಿಬ್ಬಂದಿಗಳ ವೃಂದವಾರು ಮಾಹಿತಿ ಈ ಕೆಳಗಿನಂತಿರುತ್ತದೆ:

| ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| ಎ | 310 | 120 | 190 |
| ಬಿ | 3202 | 2110 | 1092 |
| ಸಿ | 9 | 2 | 7 |
| **ಒಟ್ಟು** | **3521** | **2232** | **1289** |

....5

- ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅನುದಾನಿತ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತವೆ.

| ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| ಎ | 403 | 121 | 282 |
| ಬಿ | 1865 | 1340 | 525 |
| **ಒಟ್ಟು** | **2268** | **1461** | **807** |

ಇಲಾಖೆಯ ಸರ್ಕಾರಿ ಸಂಸ್ಥೆಗಳಲ್ಲಿನ ಖಾಲಿ ಇರುವ ಬೋಧಕ ಹುದ್ದೆಗೆದುರಾಗಿ ಸಂಸ್ಥೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ಬಳಿಕ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯ ಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2022-23ನೇ ಸಾಲಿಗೆ ಒಟ್ಟಾರೆ 1640 ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಕ್ರಮವಹಿಸಲಾಗಿರುತ್ತದೆ.

ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಕಂಡಿಕೆ 87 ರಲ್ಲಿ ಮುಂದಿನಂತೆ ಒದಲಾಗಿದೆ "ನೌಕರರ ಅರ್ಹತೆಗಳು ಮತ್ತು ಸೇವಾ ಷರತ್ತುಗಳು:- ರಾಜ್ಯ ಸರ್ಕಾರವು ಪೂರ್ವ ಪ್ರಕಟಣೆಯ ನಂತರ, ಮನ್ನಣೆ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಗಳ ನೌಕರಿ ಭರ್ತಿ ಮತ್ತು ಸೇವಾ ಷರತ್ತುಗಳನ್ನು ನಿಯಂತ್ರಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು. ಪರಂತು ರಾಜ್ಯ ಸರ್ಕಾರದಿಂದ ನಿರ್ವಹಣಾ ಅನುದಾನವನ್ನು ಪಡೆಯುವ ಶಿಕ್ಷಣ ಸಂಸ್ಥೆಗಳ ನೌಕರರ ನೌಕರಿ ಭರ್ತಿಗೆ ಕನಿಷ್ಟ ಅರ್ಹತೆಗಳು, ನೌಕರಿ ಭರ್ತಿಯ ವಯಸ್ಸು ಮತ್ತು ನಿವೃತ್ತಿ ಹಾಗೂ ನಿವೃತ್ತಿ ಸೌಲಭ್ಯಗಳು ಅನ್ಯತಾ ನಿಯಮಿಸಿರುವ ಹೊರತು ರಾಜ್ಯ ಸರ್ಕಾರದ ಸಂಸ್ಥೆಗಳಲ್ಲಿನ ಸಂವಾದಿ ಪ್ರವರ್ಗಗಳ ನೌಕರರು, ಯಾರಾದರೂ ಇದ್ದರೆ, ಅವರಿಗೆ ಅನ್ವಯವಾಗುವಂಥವೇ ಆಗಿರತಕ್ಕದ್ದು. ಈ ಹಿನ್ನಲೆಯಲ್ಲಿ ಅನುದಾನಿತ ಸಂಸ್ಥೆಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳು ಭರ್ತಿ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿಯಾಗಬೇಕಾಗಿರುತ್ತದೆ.

ಪ್ರಸ್ತುತ ಬೋಧಕ ಸಿಬ್ಬಂದಿಗಳನ್ನು ಎ.ಐ.ಸಿ.ಟಿ.ಇ ನಿಯಮಗಳ ಅನ್ವಯ ಭರ್ತಿಮಾಡಬೇಕಾಗಿದ್ದು, ಮಾರ್ಚ್ 2019 ರಂದು 07 ನೇ ಎಐಸಿಟಿಇ ನಿಯಮಗಳನ್ನು ಜಾರಿಗೆ ತರಲಾಗಿದ್ದು, ಇದರನ್ವಯ ನೇಮಕಾತಿ ವಿಧಾನ, ವಿದ್ಯಾರ್ಹತೆ ಮತ್ತು ಸೇವಾ ಷರತ್ತುಗಳನ್ನು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಅಳವಡಿಸಿಕೊಂಡ ನಂತರ ಸದರಿ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ. ಈ ಸಂಬಂಧ ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಕುರಿತಂತೆ ನಿರ್ದೇಶನಾಲಯದ ಪತ್ರ ದಿ: 02-02-2022 ಕರಡು ನಿಯಮಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಸರ್ಕಾರದ ಪತ್ರ ದಿ: 20-08-2022ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅವಲೋಕನದಂತೆ ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದ್ದು, ಈ ಕುರಿತಂತೆ ಪರಿಷ್ಕೃತ ಕರಡು ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತಂದ ಕೂಡಲೇ ಖಾಲಿ ಇರುವ ಬೋಧಕ ಹುದ್ದೆಗಳ ಭರ್ತಿ ಮಾಡಲು ಕ್ರಮಕೈಗೊಳ್ಳಲಾಗುವುದು.

** ** **